All India Radio: Bangalore
Regional Bulletin In Kannada
03.08.2025 / 6.40 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

- ಮಹದಾಯಿ ಯೋಜನೆ ಶೀಘ್ರ ಜಾರಿಗೆ ಸರ್ವಪ್ರಯತ್ನ - ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ
- ಬೆಂಗಳೂರು ಹಳದಿ ಮೆಟ್ರೋ ಮಾರ್ಗಕ್ಕೆ ಇದೇ ೧೦ರಂದು ಪ್ರಧಾನಿ ಹಸಿರು ನಿಶಾನೆ
- ಸಂಪೂರ್ಣತಾ ಅಭಿಯಾನದಡಿ ಮಸ್ಕಿ, ಸಿರವಾರ ತಾಲೂಕುಗಳಿಗೆ ಮಹತ್ವಾಕಾಂಕ್ಷಿ ಬ್ಲಾಕ್ ಯೋಜನೆ ಪ್ರಶಸ್ತಿ
- ಬೆಳಗಾವಿ ಇ.ಎಸ್.ಐ ಆಸ್ಪತ್ರೆ; ಮರು ಟೆಂಡರ್ ಪ್ರಕ್ರಿಯೆಗೆ ಕೇಂದ್ರ ಸರ್ಕಾರ ಆದೇಶ

<><><><>

೨೦೨೫ರಲ್ಲಿ ಇಲ್ಲಿಯವರೆಗೆ ರಾಜ್ಯದಲ್ಲಿ ೬.೫೫ ಲಕ್ಷ ಮೆಟ್ರಿಕ್ ಟನ್ ಮಾರಾಟವಾಗಿದೆ. ಪ್ರಸ್ತುತ ೧.೯೪ ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿದೆ. ಲಭ್ಯವಿರುವ ರಸಗೊಬ್ಬರವನ್ನು ಸಮರ್ಪಕವಾಗಿ ವಿತರಣೆ ಮಾಡಲು ರಾಜ್ಯ ಸರ್ಕಾರ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಆಗ್ರಹಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ರಾಜ್ಯದ ಬಿಜೆಪಿ ಸಂಸದರ ನಿಯೋಗ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಖಾತೆ ಸಚಿವ ಜೆ.ಪಿ. ನಡ್ಡಾ ಅವರನ್ನು ಭೇಟಿ ಮಾಡಿ ಹೆಚ್ಚುವರಿ ರಸಗೊಬ್ಬರವನ್ನು ರಾಜ್ಯಕ್ಕೆ ನೀಡುವಂತೆ ಮನವಿ ಮಾಡಿದ್ದು, ಶೀಘ್ರದಲ್ಲೇ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು. ಇದೇ ವೇಳೆ ಮಹದಾಯಿ ಯೋಜನೆ ಜಾರಿ ಕುರಿತಂತೆ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ಧ್ವನಿ : ಪ್ರಹ್ಲಾದ್ ಜೋಶಿ (೩೦ ಸೆಕೆಂಡುಗಳು)

<><><><>

ಪ್ರಧಾನಿ ನರೇಂದ್ರ ಮೋದಿ ಬೆಂಗಳೂರಿನ ಹಳದಿ ಮೆಟ್ರೋ ಮಾರ್ಗಕ್ಕೆ ಇದೇ ೧೦ರಂದು ಹಸಿರು ನಿಶಾನೆ ತೋರಲಿದ್ದಾರೆ. ಇದೇ ವೇಳೆ ಮೆಟ್ರೋ ೩ನೇ ಹಂತಕ್ಕೂ ಶಿಲಾನ್ಯಾಸ

ನೆರವೇರಿಸಲಿದ್ದಾರೆ. ಈ ಮೂಲಕ ಬೆಂಗಳೂರು ದಕ್ಷಿಣ ಭಾಗದ ಜನರ ಕನಸು ನನಸಾಗಲಿದೆ. ಆರ್.ವಿ.ರಸ್ತೆಯಿಂದ ಬೊಮ್ಮಸಂದ್ರವರೆಗಿನ ಮೆಟ್ರೋ ಹಳದಿ ಮಾರ್ಗ ಸುಮಾರು ೧೯.೧೫ ಕಿಲೋ ಮೀಟರ್ ಉದ್ದವಿದೆ. ಸುಮಾರು ೫ ಲಕ್ಷದ ೫೬ ಸಾವಿರದ ೯೯ ಕೋಟಿ ರೂಪಾಯಿ ವೆಚ್ಚದಲ್ಲಿ ಹಳದಿ ಮಾರ್ಗವನ್ನು ನಿರ್ಮಿಸಲಾಗಿದ್ದು, ಇದರಲ್ಲಿ ೧೬ ನಿಲ್ದಾಣಗಳಿವೆ. ಮೆಟ್ರೋ ೩ನೇ ಹಂತದ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದು, ಈ ಮೆಟ್ರೋ ಫೇಸ್-೩ ಮಾರ್ಗ ೪೪.೬೫ ಕಿಲೋ ಮೀಟರ್ ಉದ್ದ ವಿರಲಿದೆ. ೧೫ ಸಾವಿರದ ೬೧೧ ಕೋಟಿ ರೂಪಾಯಿ. ವೆಚ್ಚದಲ್ಲಿ ಇದು ನಿರ್ಮಾಣವಾಗಲಿದೆ. ಈ ಮಾರ್ಗದಿಂದ ಸುಮಾರು ೮ ಲಕ್ಷ ಪ್ರಯಾಣಿಕರಿಗೆ ಅನುಕೂಲವಾಗಲಿದ್ದು, ಸಿಲ್ಕ್ ಬೋರ್ಡ್ ಟ್ರಾಫಿಕ್ ಜಾಮ್ ಸಮಸ್ಯೆಗೆ ಪರಿಹಾರ ಸಿಗಲಿದೆ.

<><><><>

ಕೇಂದ್ರ ಸರ್ಕಾರದ ಸಂಪೂರ್ಣತಾ ಅಭಿಯಾನದಡಿ ರೂಪಿಸಿದ ಮಾನದಂಡಗಳನ್ನು ಸಮರ್ಪಕವಾಗಿ ಪೂರೈಸಿದ ರಾಯಚೂರು ಜಿಲ್ಲೆಯ ಮಸ್ಕಿ ಮತ್ತು ಸಿರವಾರ ತಾಲೂಕುಗಳು ಮಹತ್ವಾಕಾಂಕ್ಷಿ ಬ್ಲಾಕ್ ಯೋಜನೆ ಪ್ರಶಸ್ತಿಗೆ ಆಯ್ಕೆಯಾಗಿವೆ. ಕೇಂದ್ರ ಸರ್ಕಾರದ ನೀತಿ ಆಯೋಗ ಅಭಿವೃದ್ಧಿ ಸೂಚ್ಯಂಕಗಳು ಮುಂದುವರೆದಿವೆ ಎಂದು ಗುರುತಿಸಿ ಆ ತಾಲೂಕುಗಳಲ್ಲಿ ಕೃಷಿ, ಅಪೌಷ್ಠಿಕತೆ ನಿವಾರಣೆ, ಮಹಿಳೆ ಮತ್ತು ಮಕ್ಕಳ ಅಭಿವೃದ್ಧಿ, ಶಿಕ್ಷಣ, ಆರೋಗ್ಯ ಸೇವೆ, ಸ್ವ ಸಹಾಯ ಸಂಘಗಳ ಆರ್ಥಿಕ ಚಟುವಟಿಕೆಗಳನ್ನು ಕೇಂದ್ರ ಸರ್ಕಾರದ ನೀತಿ ಆಯೋಗ ರೂಪಿಸಿದ ಮಾನದಂಡಗಳನ್ನು ಸಮರ್ಪಕವಾಗಿ ಪೂರೈಸಿದ ಕಾರಣ ಮಹತ್ವಾಕಾಂಕ್ಷಿ ತಾಲೂಕುಗಳೆಂದು ಆಯ್ಕೆಯಾಗಿದ್ದ ಸಿರವಾರ ಮತ್ತು ಮಸ್ಕಿ ತಾಲೂಕುಗಳನ್ನು ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ. ಕೇಂದ್ರ ಸರ್ಕಾರದ ಈ ಮಹತ್ವಪೂರ್ಣ ಕಾರ್ಯಕ್ರಮ ನೀತಿ ಆಯೋಗ ರಚಿಸಿದ ಮಾನದಂಡಗಳನುಸಾರ ಡಿಸೆಂಬರ್ ೨೦೨೪ರಂದು ಕೃಷಿ, ಅಪೌಷ್ಠಿಕ ನಿವಾರಣೆ, ಮಹಿಳೆ ಮತ್ತು ಮಕ್ಕಳು ಅಭಿವೃದ್ಧಿ, ಶಿಕ್ಷಣ, ಆರೋಗ್ಯ ಸೇವೆ, ಸ್ವ ಸಹಾಯ ಸಂಘಗಳ ಆರ್ಥಿಕ ಚಟುವಟಿಕೆಗಳನ್ನು ಸಮರ್ಪಕವಾಗಿ ನಿರ್ವಹಿಸಿದ ಕಾರಣ ಕೇಂದ್ರ ಸರ್ಕಾರ ೧ ಕೋಟಿ ರೂಪಾಯಿ ಪ್ರೋತ್ಸಾಹ ಧನ ಘೋಷಣೆ ಮಾಡಿದೆ.

<><><><>

ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆಯಲ್ಲಿ ನೈರುತ್ಯ ರೈಲ್ವೆ ವಿಭಾಗ ಬೆಂಗಳೂರಿನಿಂದ ರಾಜ್ಯದ ವಿವಿಧೆಡೆ ಹಾಗೂ ಹೊರರಾಜ್ಯಗಳಿಗೆ ವಿಶೇಷ ರೈಲು ಓಡಿಸಲು ನಿರ್ಧರಿಸಿದೆ. ಬೆಂಗಳೂರು

ಮೈಸೂರು, ಬೀದರ್, ಬೆಳಗಾವಿ, ಹುಬ್ಬಳ್ಳಿ, ವಿಜಯಪುರ ಸೇರಿದಂತೆ ರಾಜ್ಯದ ವಿವಿಧೆಡೆಗೆ ರೈಲುಗಳು ಪ್ರಯಾಣಿಸಲಿವೆ. ಈ ಕುರಿತಂತೆ ಆಕಾಶವಾಣಿಗೆ ನೈರುತ್ಯ ರೈಲ್ವೆ ವಲಯದ ಸಾರ್ವಜನಿಕ ಸಂಪರ್ಕಾಧಿಕಾರಿ ಪ್ರಾಣೇಶ್ ಕೆ.ಆರ್. ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಪ್ರಾಣೇಶ್ ಕೆ.ಆರ್., ಪಿಆರ್‌ಒ ರೈಲ್ವೆ ಬೆಂಗಳೂರು. (೩೦ ಸೆಕೆಂಡುಗಳು)

<><><>

ಕೇಂದ್ರ ಸರ್ಕಾರಕ್ಕೆ ಮತ್ತೊಮ್ಮೆ ವಿಶೇಷ ಮನವಿ ಮೇರೆಗೆ ಬೆಳಗಾವಿಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ೧೦೦ ನೂರು ಹಾಸಿಗೆಗಳ ಇ.ಎಸ್.ಐ.ಸಿ ಆಸ್ಪತ್ರೆಯ ಮರು ಟೆಂಡರ್ ಪ್ರಕ್ರಿಯೆಗೆ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ ಎಂದು ರಾಜ್ಯಸಭಾ ಸದಸ್ಯ ಈರಣ್ಣ ಕಡಾಡಿ ತಿಳಿಸಿದ್ದಾರೆ. ೨೦೨೩ರ ಫೆಬ್ರುವರಿಯಲ್ಲಿ ೧೦೦ ಹಾಸಿಗೆಗಳ ಇ.ಎಸ್.ಐ.ಸಿ ಆಸ್ಪತ್ರೆ ಬೆಳಗಾವಿ ಜಿಲ್ಲೆಗೆ ಮಂಜೂರಾಗಿದ್ದು ಆ ಕಟ್ಟಡದ ನಿರ್ಮಾಣಕ್ಕೆ ಸ್ಥಳ ಒದಗಿಸುವಲ್ಲಿ ರಾಜ್ಯ ಸರ್ಕಾರ ಸುಮಾರು ಎರಡು ವರ್ಷಗಳ ಕಾಲ ವಿಳಂಬ ಮಾಡಿದ ಕಾರಣ ಟೆಂಡರ್ ಪ್ರಕ್ರಿಯೆಯನ್ನು ಕೇಂದ್ರ ಸರ್ಕಾರ ಹಿಂತೆಗೆದುಕೊಂಡಿತ್ತು.

<><><>

ದೆಹಲಿಯ ಕೆಂಪುಕೋಟೆಯಲ್ಲಿ ಇದೇ ೧೫ ರಂದು ನಡೆಯಲಿರುವ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮಕ್ಕೆ ಕರ್ನಾಟಕದ ವಿವಿಧ ಜಿಲ್ಲೆಯ ಏಳು ಜನ ಗ್ರಾಮಪಂಚಾಯಿತಿ ಅಧ್ಯಕ್ಷರನ್ನು ವಿಶೇಷ ಅತಿಥಿಗಳಾಗಿ ಭಾಗವಹಿಸಲು ಅಹ್ವಾನ ನೀಡಲಾಗಿದೆ. ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಆನೆಗೊಂದಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಹುಲಿಗೆಮ್ಮ ಹೊನ್ನಪ್ಪ ನಾಯಕ, ಶೃಂಗೇರಿ ತಾಲೂಕಿನ ಕೆರೆ ಗ್ರಾಮಪಂಚಾಯಿತಿ ಅಧ್ಯಕ್ಷೆ ಲಕ್ಷ್ಮೀ ಗೋಪಾಲ್, ಕೊಡಗು ಜಿಲ್ಲೆಯ ಹುಡುಕೇರಿ ಗ್ರಾಮಪಂಚಾಯಿತಿ ಅಧ್ಯಕ್ಷೆ ಕಾವೇರಮ್ಮ, ಬೆಳ್ತಂಗಡಿ ತಾಲೂಕಿನ ಉಜಿರೆ ಗ್ರಾಮಪಂಚಾಯಿತಿ ಅಧ್ಯಕ್ಷೆ ಉಷಾಕಿರಣ, ತುಮಕೂರು ತಾಲೂಕಿನ ಮ್ಯಾಡಾಳ ಗ್ರಾಮಪಂಚಾಯಿತಿ ಅಧ್ಯಕ್ಷ ಉಮೇಶ, ಖಾನಾಪುರ ತಾಲೂಕಿನ ನಂದಗಡ ಗ್ರಾಮಪಂಚಾಯಿತಿ ಅಧ್ಯಕ್ಷ ಯಲ್ಲಪ್ಪ, ಚಿತ್ತಾಪುರ ತಾಲೂಕಿನ ಕರಡಾಳ ಗ್ರಾಮಪಂಚಾಯಿತಿ ಅಧ್ಯಕ್ಷೆ ಮೆಮ್ತಾಜ್‌ಬೇಗಂ ಅವರಿಗೆ ಅಹ್ವಾನ ನೀಡಲಾಗಿದೆ. ಈ ಸಂದರ್ಭದಲ್ಲಿ ಆನೆಗುಂದಿ ಪಂಚಾಯತಿ ಅಧ್ಯಕ್ಷೆ ಹುಲಿಗೆಮ್ಮ ಹೊನ್ನಪ್ಪ ನಾಯಕ ಆಕಾಶವಾಣಿಯೊಂದಿಗೆ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದಾರೆ.

ಬೈಟ್:- ಹುಲಿಗೆಮ್ಮಹೊನ್ನಪ್ಪ ನಾಯಕ ಗ್ರಾಮ ಪಂಚಾಯತಿ ಅಧ್ಯಕ್ಷರು ಆನೆಗೊಂದಿ

<><><>

ಪಿಎಂ ಕಿಸಾನ್ ಸಮ್ಮಾನ್ ಯೋಜನೆಯಡಿ ೨೦ನೇ ಕಂತಿನಲ್ಲಿ ಕೋಲಾರ ಜಿಲ್ಲೆಯ ೯೭ಸಾವಿರ ರೈತರಿಗೆ ೨೦ ಕೋಟಿ ರೂಪಾಯಿ ಮೊತ್ತ ಡಿಬಿಟಿ ಮೂಲಕ ನೇರ ವರ್ಗಾವಣೆಯಾಗಿದೆ ಎಂದು ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಡಾ.ಶಿವಾನಂದ ಹೊಂಗಲ್ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ಪ್ರತಿ ರೈತರಿಗೆ ೨ ಸಾವಿರ ರೂಪಾಯಿಯಂತೆ ರೈತರ ಖಾತೆಗೆ ಜಮೆಯಾಗಿದ್ದು, ಈ ಹಣವು ರೈತರು ಕೃಷಿ ಚಟುವಟಿಕೆಗಳು, ಬಿತ್ತನೆ ಕಾರ್ಯ, ಕೃಷಿ ಪರಿಕರಗಳ ಖರೀದಿಗೆ ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ.

<><><>

ವಾಯು ಸೇನೆ ಪೈಲಟ್‌ಗಳಿಗೆ ತರಬೇತಿ ನೀಡಲು ಬಳಸುತ್ತಿದ್ದ ಎರಡು ಸೀಟ್‌ನ ಹೆಚ್ ಎ ಎಲ್ ಹೆಚ್ ಜೆಟಿ-೧೬ ಕಿರಣ್ ಯುದ್ಧ ವಿಮಾನ ಶೀಘ್ರದಲ್ಲೆ ಶಿವಮೊಗ್ಗಕ್ಕೆ ಆಗಮಿಸಲಿದೆ. ಶಿವಮೊಗ್ಗ ಜಿಲ್ಲೆಯ ಯುವಕರಲ್ಲಿ ದೇಶಾಭಿಮಾನ, ಸೈನ್ಯಕ್ಕೆ ಸೇರಲು ಪ್ರೇರಣೆ ನೀಡುವ ಉದ್ದೇಶದಿಂದ ಈಗಾಗಲೆ ಯುದ್ಧ ಟ್ಯಾಂಕರ್ ತಂದು ನಗರದ ಅಲ್ಲಮಪ್ರಭು ಮೈದಾನದಲ್ಲಿ ಸ್ಥಾಪಿಸಲಾಗಿದೆ. ಈಗ ಭಾರತೀಯ ವಾಯು ಸೇನೆ ಬಳಸುತ್ತಿದ್ದ ವಿಮಾನ ಶೀಘ್ರ ನಗರಕ್ಕೆ ಆಗಮಿಸಲಿದೆ. ಈ ವಿಮಾನವನ್ನು ಹಿಂದೂಸ್ಥಾನ್ ಏರೊನಾಟಿಕಲ್ ಲಿಮಿಟೆಡ್ ಭಾರತೀಯ ವಾಯಪಡೆಗಾಗಿ ಅಭಿವೃದ್ಧಿಪಡಿಸಿದೆ. ಈ ಬಗ್ಗೆ ಮಾಹಿತಿ ನೀಡಿರುವ ಸಂಸದ ಬಿ.ವೈ.ರಾಘವೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್ ನಿವೃತ್ತಿ ಪಡೆದಿರುವ ಹೆಚ್‌ಎಎಲ್ ಹೆಚ್‌ಜೆಟಿ-೧೬ ಕಿರಣ್ ವಿಮಾನವನ್ನು ಶಿವಮೊಗ್ಗಕ್ಕೆ ನೀಡಲು ಮಂಜೂರಾತಿ ನೀಡಿದ್ದಾರೆ. ಈ ವಿಮಾನದ ಸೇರ್ಪಡೆ ಯುವಕರನ್ನು ಪ್ರೇರೇಪಿಸಲು, ಸಶಸ್ತ್ರ ಪಡೆಗಳನ್ನು ಗೌರವಿಸಲು ಮತ್ತು ಮಲೆನಾಡಿನ ಹೆಬ್ಬಾಗಿಲಾದ ಸ್ಮಾರ್ಟ್ ಸಿಟಿಯ ಪ್ರತಿಷ್ಠೆಯನ್ನು ಮತ್ತಷ್ಟು ಹೆಚ್ಚಿಸುತ್ತದೆ ಎಂದು ತಿಳಿಸಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>